**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ತಿ.ನರಸೀಪುರ.**

**ಓ.ಎಸ್. ನಂಃ21/2019 ಪಿ.ಡಬ್ಲೂಃ 01**

ಸಾಕ್ಷಿಯನ್ನು ಇಂದು ದಿನಾಂಕಃ**11.04.2023** ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರ ಶ್ರೀ. **ಎಸ್.ಜೆ** ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ನನಗೆ ತಿಳಿದಿದ್ದು, ಪ್ರಮಾಣ ಪತ್ರವನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿದೆ. ಅದಕ್ಕೆ ನಾನು ರುಜು ಮಾಡಿರುತ್ತೇನೆ.

ನಾನು **1** ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-**1** ಎಂದು, ದಿನಾಂಕ **23.06.1997** ರ ಕ್ರಯ ಪತ್ರದ ದೃಡೀಕೃತ ನಕಲನ್ನು ನಿಪಿ-**2** ಎಂದು, ದಿನಾಂಕ **22.03.2002** ರ ಕ್ರಯ ಪತ್ರದ ದೃಡೀಕೃತ ನಕಲನ್ನು ನಿಪಿ-**3** ಎಂದು, ದಿನಾಂಕ **07.02.2000** ರ ಕ್ರಯ ಪತ್ರದ ದೃಡೀಕೃತ ನಕಲನ್ನು ನಿಪಿ-**4** ಎಂದು, ದಿನಾಂಕ **15.02.2000** ರ ಕ್ರಯ ಪತ್ರದ ದೃಡೀಕೃತ ನಕಲನ್ನು ನಿಪಿ-**5** ಎಂದು, **1** ಮುಟೇಷನ ಆದೇಶವನ್ನು ನಿಪಿ-**6** ಎಂದು, ಭೂಮಿ ವರದಿಯ ದೃಡೀಕೃತ ನಕಲನ್ನು ನಿಪಿ-**7** ಎಂದು, ನಮೂನೆ-**10** ರ ದೃಡೀಕೃತ ನಕಲನ್ನು ನಿಪಿ-**8** ಎಂದು, ದಿನಾಂಕ **12.03.2019** ರ ದಾನಪತ್ರದ ದೃಡೀಕೃತ ನಕಲನ್ನು ನಿಪಿ-**9** ಎಂದು, **1** ಪಹಣಿ ಪತ್ರಿಕೆಯನ್ನು ನಿಪಿ-**10** ಎಂದು, **3** ಪಹಣಿ ಪತ್ರಿಕೆಗಳನ್ನು ನಿಪಿ-**11** ರಿಂದ ನಿಪಿ-**13** ಎಂದು, **1** ಕೃಷಿ ಪಾಸಪುಸ್ತಕವನ್ನು ನಿಪಿ-**14** ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ವಾದಿ ಪರ ವಕೀಲರು ಸಮಯ ಕೋರಿದ್ದು ಮುಂದೂಡಲಾಯಿತು.

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ ಹೇ ಕೆ ಸರಿ ಇದೆ.

**ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,**

**ನ್ಯಾಯಾಲಯ ತಿ.ನರಸೀಪುರ.**